ಸರ್ಕಾರಕ್ಕೆ ಕಳುಹಿಸಲಾಗಿದೆ. ಇದರ ಅಲೈನ್‌ಮೆಂಟ್ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರದ ಒಪ್ಪಿಗೆಗಾಗಿ ಕಳುಹಿಸಲಾಗಿದ್ದು ಅವರ ಒಪ್ಪಿಗೆಯನ್ನು ನಿರೀಕ್ಷಿಸಲಾಗುತ್ತಿದೆ.

ಬಾಕಿ ಉಳಿದಿರುವ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್‌ನ ಹೊಸ ವಿಧೇಯಕ.

47. ಶ್ರೀ ಎಸ್. ಷಫಿ ಅಹಮದ್ (ತುಮಕೂರು) :– ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಹಾಗೂ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ–

ಅ) ಕಾರ್ಯರೂಪಗೊಳ್ಳದೆ ಬಾಕಿ ಉಳಿದಿರುವ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್‌ನ ಹೊಸ ವಿಧೇಯಕವು ಯಾವ ಹಂತದಲ್ಲಿದೆ ಮತ್ತು ಯಾವಾಗ ಇದು ಕಾರ್ಯರೂಪಕ್ಕೆ ಬರುವುದು?

ಆ) ಸರ್ಕಾರವು ಕ್ಷೇತ್ರ ವಿಂಗಡಣೆಯ ಕಾರ್ಯದಲ್ಲಿ ಜಿಲ್ಲಾ ಪರಿಷತ್ ಮತ್ತು ಮಂಡಲ ಪಂಚಾಯಿತಿ ಮತ ಕ್ಷೇತ್ರಗಳನ್ನು ಗಣನೆಗೆ ತೆಗೆದುಕೊಂಡು ವಿಂಗಡಿಸುವುದೇ?

ಶ್ರೀ. ಎಂ. ಮಲ್ಲಿಕಾರ್ಜುನ ಖರ್ಗೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಂದಾಯ ಸಚಿವರು) :–

ಅ) ಈಗಿರುವ ಕಾಯಿದೆಯಲ್ಲಿನ ನಿಯಮಗಳನ್ನು ಕಾರ್ಯರೂಪಕ್ಕೆ ತರುವಾಗ ಹೊಂದಿದ ಅನುಭವದ ಆಧಾರದ ಮೇಲೆ ಮತ್ತು 72ನೇ ತಿದ್ದುಪಡಿ ಕಾಯಿದೆಯ ಮುಖ್ಯಾಂಶಗಳ ಹಿನ್ನೆಲೆಯಲ್ಲಿ ಹೊಸ ಕರ್ನಾಟಕ ಪಂಚಾಯತ್ ರಾಜ್ ಮಸೂದೆಯು ಕಾನೂನು ಇಲಾಖೆಯಲ್ಲಿ ಕೊನೆಯ ಹಂತದಲ್ಲಿದೆ. ಈ ಮಸೂದೆಯನ್ನು ರಾಜ್ಯದ ವಿಧಾನ ಮಂಡಲದ ಮುಂದೆ ಮಂಡಿಸಲಾಗುವುದು.

ಆ) ಹೌದು
ಹೊಸ ವಿಧೇಯಕದಲ್ಲಿ ತರಲಾಗುವ ನಿಯಮದಂತೆ ಕ್ರಮ ತೆಗೆದುಕೊಳ್ಳಲಾಗುವುದು.

ಮಲಪ್ರಭ ಬಲದಂಡೆ ಕಾಲುವೆ ಪ್ರಾರಂಭ

856. ಶ್ರೀ ಹೆಚ್. ವೈ. ಮೇಟಿ (ಗುಳ್ಯೆದಗುಡ್ಡ) :– ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ –

ಅ) ಮಲಪ್ರಭಾ ಬಲದಂಡೆ ಕಾಲುವೆಯ ಯೋಜನೆಯನ್ನು ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕಿದೆಯೆ;

ಆ) ಹಾಗಿದ್ದಲ್ಲಿ, ಎಂದಿನಿಂದ ಪ್ರಾರಂಭಿಸಲಾಗುವುದು;

ಇ) ಇದರ ಅಂದಾಜು ವೆಚ್ಚವೆಷ್ಟು?

ಶ್ರೀ ಮಲ್ಲಾರಿಗೌಡ ಎಸ್. ಪಾಟೀಲ್ (ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು) :–

ಅ) ಮಲಪ್ರಭಾ ಬಲದಂಡೆ ಕಾಲುವೆ ಕಾಮಗಾರಿಗಳು ಈಗಾಗಲೇ ಪ್ರಗತಿಯಲ್ಲಿವೆ.

ಆ) ಉದ್ಭವಿಸುವುದಿಲ್ಲ.

ಇ) 183.74 ಕೋಟಿ ರೂ. ಗಳು (1987 – 88 ರ ದರಗಳ ಪ್ರಕಾರ)